# Akashvani : Bangalore

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 03.01.2024 / 18.40 hrs

<u>ಮುಖ್ಯಾಂಶಗಳು</u>

೧. ಬೆಳಗಾವಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಕ್ಯಾನ್ಸರ್ ಆಸ್ಪತ್ರೆ; ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಉದ್ಘಾಟನೆ

೨. ರಾಜ್ಯದ ರೈತರ ಪಾಲಿಗೆ ಮನರೇಗಾ ಯೋಜನೆ ಬೆಳಕಾಗಿದೆ - ಸಚಿವ ಪ್ರಿಯಾಂಕ್ ಖರ್ಗೆ

೩. ದೇಶದ ಒಂದು ನೂರು ಸ್ಥಳಗಳಲ್ಲಿ ಸದ್ಯದಲ್ಲೇ ಆಯುಷ್ ಕೇಂದ್ರಗಳ ಸ್ಥಾಪನೆ - ಜೆ.ಪಿ.ನಡ್ಡಾ

೪. ನಾಳೆ ಮೈಸೂರಿನಲ್ಲಿ ದಕ್ಷಿಣ ಮತ್ತು ನೈಋತ್ಯ ಪ್ರದೇಶಗಳ ಜಂಟಿ ಪ್ರಾದೇಶಿಕ ಅಧಿಕೃತ ಭಾಷಾ ಸಮ್ಮೇಳನ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಬೆಳಗಾವಿಯಲ್ಲಿ ಕೆ.ಎಲ್.ಇ. ಸಂಸ್ಥೆಯ ಸಮಗ್ರ ಚಿಕಿತ್ಸೆಯನ್ನು ಒಳಗೊಂಡ ಅತ್ಯಾಧುನಿಕ ತಂತ್ರಜ್ಞಾನದ ಸುಸಜ್ಜಿತ ಡಾ.ಸಂಪತ್ ಕುಮಾರ್ ಶಿವಯೋಗಿ ನೂತನ ಕ್ಯಾನ್ಸರ್ ಆಸ್ಪತ್ರೆಯನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಭಾರತ ಸರ್ಕಾರ ದೇಶದ ಜನರ ಆರೋಗ್ಯ ಕಾಪಾಡುವಲ್ಲಿ ಆಯುಷ್ಮಾನ್ ಭಾರತ ಆರೋಗ್ಯ ಯೋಜನೆ ಜಾರಿಗೆ ತಂದಿದ್ದು, ಬಡವರು, ಗ್ರಾಮೀಣರಿಗೆ ದೊರೆಯುತ್ತಿದ್ದ ಸೌಕರ್ಯವನ್ನು ೭೦ ವರ್ಷ ಪೂರೈಯಿಸಿದ ಹಿರಿಯ ನಾಗರಿಕರಿಗೂ ವಿಸ್ತರಿಸಲಾಗಿದೆ. ಜನರ ಆರೋಗ್ಯ ಕಾಪಾಡುವಲ್ಲಿ ಯೋಜನೆ ಮಹತ್ತರ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು. ಜಗತ್ತಿನಾದ್ಯಂತ ಇಂದು ೨೦ ಬಿಲಿಯನ್ ಜನರು ಕ್ಯಾನ್ಸರ್ ರೋಗದಿಂದ ಬಳಲುತ್ತಿದ್ದಾರೆ. ಭಾರತದಲ್ಲಿ ಸಾವಿರಕ್ಕೆ ನೂರು ಜನ ಈ ರೋಗಕ್ಕೆ ತುತ್ತಾಗುತ್ತಿದ್ದಾರೆ. ಇಂಥ ಆಸ್ಪತ್ರೆಗಳು ಸಾರ್ವಜನಿಕರಿಗೆ ಗುಣಮಟ್ಟದ ಚಿಕಿತ್ಸೆ ನೀಡುವಲ್ಲಿ ವಿಶೇಷ ಪಾತ್ರವಹಿಸಲಿದೆ ಎಂಬ ನಂಬಿಕೆಯಿದೆ ಎಂದರು.

ವೈದ್ಯರು ತಮ್ಮ ಪ್ರಾಮಾಣಿಕ ಸೇವೆಯೊಂದಿಗೆ ಸಾರ್ವಜನಿಕರ ವಿಶ್ವಾಸಕ್ಕೆ ಪಾತ್ರವಾಗಬೇಕೆಂದು ರಾಷ್ಟ್ರಪತಿ ಸಲಹೆ ನೀಡಿದರು. ಸಚಿವ ಪ್ರಲ್ಹಾದ ಜೋಶಿ ಅವರು ಮಾತನಾಡಿ, ತಪ್ಪು ಜೀವನ ವಿಧಾನ ಹಾಗೂ ಸಮತೋಲನ ಆಹಾರದ ಕೊರತೆಯಿಂದಾಗಿ ಇಂದು ಜನರು ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ದೇಶದಲ್ಲಿ.ಪ್ರತಿಶತ ೧೨.೮ ರಷ್ಟು ಜನ ಕ್ಯಾನ್ಸರ್ ರೋಗದಿಂದ ಬಳಲುತ್ತಿದ್ದಾರೆ. ಭಾರತ ಸರ್ಕಾರ ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ವಿಶೇಷ ಆದ್ಯತೆ ನೀಡಿದೆ ಎಂದು ತಿಳಿಸಿದರು.

**<><*<><>*><>**

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನಗಳ ಅಧ್ಯಯನ ಸಂಸ್ಥೆ-ನಿಮ್ಹಾನ್ಸ್‌ನ ಕೊಡುಗೆಯನ್ನು ಮಾನಸಿಕ ಆರೋಗ್ಯ ಕುರಿತಾದ ನೀತಿ ನಿರೂಪಣೆಯಲ್ಲಿ ಜಾಗತಿಕವಾಗಿ ಗುರುತಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ನಿಮ್ಹಾನ್ಸ್‌ನ ಸುವರ್ಣ ಮಹೋತ್ಸವದ ಸಂದರ್ಭದಲ್ಲಿ ಇಂದು ನಡೆದ ಸಮಾರಂಭದಲ್ಲಿ ಅವರು, ರಾಜ್ಯದಲ್ಲಿ ಮಾನಸಿಕ ಆರೋಗ್ಯ ಸೇವೆಯನ್ನು ಕಲ್ಪಿಸಲು ಸರ್ಕಾರ ನಿಮ್ಹಾನ್ಸ್ ನೊಂದಿಗೆ ಜೊತೆಗೂಡಿ ಕಾರ್ಯ ನಿರ್ವಹಿಸುತ್ತಿದ್ದು, ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ. ಜಿಲ್ಲಾ ಮತ್ತು ತಾಲೂಕು ಮಟ್ಟಗಳಲ್ಲಿ ಆತ್ಮಹತ್ಯೆ ತಡೆ, ದುಶ್ಚಟ ಮುಕ್ತರಿಗೆ ಪುನರ್ವಸತಿ ಮತ್ತು ಸಮುದಾಯ ಮಾನಸಿಕ ಆರೋಗ್ಯ ಕಾರ್ಯಕ್ರಮಗಳಿಗೆ ಒತ್ತು ನೀಡಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ರಾಜ್ಯದ ರೈತರ ಪಾಲಿಗೆ ಬೆಳಕಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಉಲ್ಲೇಖಿಸಿರುವ ಅವರು, ಮನರೇಗ

ಯೋಜನೆಯಡಿ ರೈತರು, ಕೃಷಿಹೊಂಡ, ಬದು ನಿರ್ಮಾಣ, ಭೂಮಿ ಸುಧಾರಣೆ ಮಾಡಿಕೊಳ್ಳಬಹುದು. ದನದ ಕೊಟ್ಟಿಗೆ ಮತ್ತು ಶೆಡ್‌ಗಳನ್ನು ನಿರ್ಮಿಸಬಹುದು. ತೋಟಗಾರಿಕೆ ಇಲಾಖೆಯಿಂದ ನೆರವು ಪಡೆದು, ಹಣ್ಣಿನ ತೋಟ ಮಾಡಿಕೊಳ್ಳಬಹುದು. ಅರಣ್ಯ ಇಲಾಖೆಯ ವತಿಯಿಂದ ವಲಯದ ಬದುಗಳಲ್ಲಿ ಸಸಿ ನೆಡಲು ಅವಕಾಶವಿದೆ. ಹತ್ತಾರು ಯೋಜನೆಗಳನ್ನು ಮನರೇಗ ಮೂಲಕ ರೈತರು ಪಡೆಯುತ್ತಿದ್ದಾರೆ ಎಂದರು. ಗ್ರಾಮೀಣ ಜನತೆ ವೈಯಕ್ತಿಕ ಕಾಮಗಾರಿಗಾಗಿ ಗ್ರಾಮಸಭೆಗಳಲ್ಲಿ ಬೇಡಿಕೆ ಸಲ್ಲಿಸಬೇಕಾಗಿತ್ತು. ಈಗ ಆನ್‌ಲೈನ್ ಮೂಲಕ ಕಾಮಗಾರಿಕ ಬೇಡಿಕೆ ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆ. ಈ ವಿನೂತನ ವ್ಯವಸ್ಥೆಗೆ ರಾಜ್ಯಾದ್ಯಂತ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

<><*<><>*><>

ಹೇಮಾವತಿ ಲಿಂಕ್ ಕೆನಾಲ್ ಎಕ್ಸ್‌ಪ್ರೆಸ್ ಯೋಜನೆ ತುಮಕೂರು ಜಿಲ್ಲೆಯ ಪಾಲಿಗೆ ಮರಣ ಶಾಸನವಾಗಿದೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ಗುಬ್ಬಿಯಲ್ಲಿಂದು ಕೇಂದ್ರ ಸರ್ಕಾರದ ಹಲವು ಯೋಜನೆಗಳ ಸೌಲಭ್ಯಗಳನ್ನು ಫಲಾನುಭವಿಗಳಿಗೆ ವಿತರಿಸಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಗಡಿ ತಾಲೂಕಿನ ಮೂಲಕ ರಾಮನಗರಕ್ಕೆ ನೀರು ಹರಿಸಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ಆರೋಪಿಸಿದರು.

<><*<><>*><>

ರಾಜ್ಯದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಭರವಸೆಯ ಸುಳ್ಳು ಹೇಳಿ ಅಧಿಕಾರಕ್ಕೆ ಬಂದಿದೆ. ಎಲ್ಲ ದರಗಳ ಏರಿಕೆ ಮಾಡಿ, ಜನಸಾಮಾನ್ಯರ ದೈನಂದಿನ ಜೀವನವನ್ನು ದುಸ್ತರಗೊಳಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಕ್ಷೇಪಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿದ್ಯುತ್, ಹಾಲು, ಡಿಸೆಲ್, ಪೆಟ್ರೋಲ್, ಮೊದಲಾಗಿ ಇದೀಗ ಬಸ್ ಪ್ರಯಾಣ ದರವನ್ನು ಏರಿಕೆ ಮಾಡಿ, ಜನರಿಗೆ ಮತ್ತಷ್ಟು ತೊಂದರೆ ನೀಡಿದೆ ಎಂದರು.

<><*<><>*><>

ದೇಶದಲ್ಲಿರುವ ೨೨ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಕೇಂದ್ರ- ಏಮ್ಸ್ ಗಳಲ್ಲಿ ಆಯುಶ್ ವಿಭಾಗಗಳನ್ನು ಈಗಾಗಲೇ ತೆರೆಯಲಾಗಿದೆ. ಶೀಘ್ರದಲ್ಲೇ ದೇಶದ ಒಂದು ನೂರು ಸ್ಥಳಗಳಲ್ಲಿ ಆಯುಷ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಕೇಂದ್ರ ಆರೋಗ್ಯ ಸಚಿವ ಜಯಪ್ರಕಾಶ್ ನಡ್ಡಾ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಎಸ್-ವ್ಯಾಸ ಸ್ಕೂಲ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್ ಅನ್ನು ಉದ್ಘಾಟಿಸಿ, ಮಾತನಾಡಿದ ಅವರು, ಆಯುಶ್ ಸಂಶೋಧನಾ ಕೇಂದ್ರಗಳು- ದತ್ತಾಂಶ ಸಂಗ್ರಹ ಮತ್ತು ಸಂಶೋಧನೆಯಲ್ಲಿ ನಿರತವಾಗಿವೆ. ಅಲ್ಲದೇ, ಅನೇಕ ಸಂಶೋಧನಾ ಪ್ರಬಂಧಗಳನ್ನು ಈಗಾಗಲೇ ಪ್ರಕಟಿಸಿವೆ ಎಂದು ಹೇಳಿದರು. ನೆಲಮಂಗಲ ಮತ್ತು ಒಡಿಶಾದಲ್ಲಿ ಈಗಾಗಲೇ ಕೇಂದ್ರೀಯ ಆಯುರ್ವೇದ ಸಂಶೋಧನಾ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ. ಮಾನಸಿಕ ಆರೋಗ್ಯ ಇಲ್ಲದೇ ದೈಹಿಕ ಆರೋಗ್ಯ ಸಾಧ್ಯವಿಲ್ಲ. ಆಧುನಿಕ ವೈದ್ಯಕೀಯ ವಿಜ್ಞಾನದೊಂದಿಗೆ ಯೋಗವನ್ನು ಅನುಸರಿಸಿದರೆ ಮಾತ್ರ ಸಂಪೂರ್ಣ ಆರೋಗ್ಯ ಸಾಧ್ಯ ಎಂದು ಅವರು ಪ್ರತಿಪಾದಿಸಿದರು.

<><*<><>*><>

ದಕ್ಷಿಣ ಮತ್ತು ನೈಋತ್ಯ ಪ್ರದೇಶಗಳ ಜಂಟಿ ಪ್ರಾದೇಶಿಕ ಅಧಿಕೃತ ಭಾಷಾ ಸಮ್ಮೇಳನವು ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ. ಸರ್ಕಾರಿ ಕೆಲಸಗಳಲ್ಲಿ ಹಿಂದಿ ಭಾಷೆಯ ಪ್ರಗತಿಪರ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಪ್ರತೀ ಆರ್ಥಿಕ ವರ್ಷದಲ್ಲಿ ನಾಲ್ಕು ಪ್ರಾದೇಶಿಕ ಅಧಿಕೃತ ಭಾಷಾ ಸಮ್ಮೇಳನಗಳನ್ನು ಆಯೋಜಿಸಲಾಗುತ್ತದೆ ಎಂದು ಗೃಹ ವ್ಯವಹಾರಗಳ ಸಚಿವಾಲಯದ ಜಂಟಿ ನಿರ್ದೇಶಕ ರಾಜೇಶ್ ಕುಮಾರ್ ಶ್ರೀವಾಸ್ತವ ಹೇಳಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದಿ ಭಾಷೆಯ ಬಳಕೆಯ ಆಧಾರ ಮೇಲೆ ದೇಶವನ್ನು ಮೂರು ಪ್ರದೇಶಗಳಾಗಿ ವರ್ಗೀಕರಿಸಲಾಗಿದೆ. ದಕ್ಷಿಣ ಪ್ರದೇಶಕ್ಕೆ ಆಂಧ್ರ ಪ್ರದೇಶ ಮತ್ತು ಕರ್ನಾಟಕ ಹಾಗೂ ನೈಋತ್ಯ ಪ್ರದೇಶಕ್ಕೆ ಕೇರಳ, ತಮಿಳುನಾಡು, ಪುದುಚೇರಿ ಮತ್ತು ಲಕ್ಷದ್ವೀಪಗಳು ಸೇರುತ್ತವೆ. ಈ ಪ್ರದೇಶಗಳಲ್ಲಿ ಒಕ್ಕೂಟದ ಅಧಿಕೃತ ಭಾಷಾ ನೀತಿಯ ಅನುಷ್ಠಾನಕ್ಕಾಗಿ ಮತ್ತು ಹಿಂದಿಯನ್ನು ಉತ್ತೇಜಿಸಲು ಈ ಸಮ್ಮೇಳನಗಳು ಸಹಕಾರಿ ಎಂದು ಅವರು ಹೇಳಿದರು.

**<><*<><>*><>**

ಕಾಮಗಾರಿಗಳು ಸಕಾಲಕ್ಕೆ ಪೂರ್ಣಗೊಳ್ಳಬೇಕಾದರೆ, ನಿರಂತರವಾಗಿ ಕೆಲಸ ನಡೆಯಬೇಕು ಎಂದು ಸಣ್ಣ ನೀರಾವಾರಿ ಸಚಿವ ಎನ್.ಎಸ್.ಭೋಸರಾಜು ಹೇಳಿದ್ದಾರೆ. ಕೊಪ್ಪಳ ತಾಲೂಕು ನಾರಾಯಣಪೇಟೆ ಗ್ರಾಮದ ಕೊಪ್ಪಳ ಯಲಬುರ್ಗಾ ಕೆರೆ ತುಂಬಿಸುವ ಯೋಜನೆಯ ಮೊದಲ ಹಂತದ ಕಾಮಗಾರಿ ಪರಿವೀಕ್ಷಣೆ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

**<><*<><>*><>**

ಇನ್ನು ಸಂಕ್ಷಿಪ್ತ ಸುದ್ದಿ.

೧. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಿದ ನಂತರ ಮಂಡ್ಯ ಜಿಲ್ಲೆಯಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ ಕಾರ್ಯ ಪ್ರಗತಿಯಲ್ಲಿದೆ. ಚಿಕ್ಕ ಮಂಡ್ಯದಲ್ಲಿ ಇಂದು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸ್ಥಳ ಪರಿಶೀಲನೆ ನಡೆಸಲಾಯಿತು.

೨. ಚಿತ್ರದುರ್ಗ ಜಿಲ್ಲೆಯಲ್ಲಿ ಶಾಸಕರ ಅನುದಾನದಲ್ಲಿ ಹಿರಿಯ ನಾಗರಿಕರಾಗಿ ೨೦ ಲಕ್ಷ ರೂಪಾಯಿ ಮೀಸಲಿಡಲಾಗಿದೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದ್ದಾರೆ. ಹಿರಿಯ ನಾಗರಿಕರಿಗಾಗಿ ಇಂದು ಉಚಿತ ನೇತ್ರ ತಪಾಸಣೆ ಶಿಬಿರವನ್ನು ನಡೆಸಲಾಯಿತು.

೩. ಕೊಪ್ಪಳ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಮಕ್ಕಳ ಫಲಿತಾಂಶ ಸುಧಾರಣೆಗೆ ಆದ್ಯಗಮನ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ರತ್ನಮ್ ಪಂಡೇಯ ಸೂಚಿಸಿದ್ದಾರೆ. ಪರೀಕ್ಷೆಗಳು ಸಮೀಸುತ್ತಿದ್ದು, ಮಕ್ಕಳಿಗೆ ರಿವಿಜನ್ ತರಗತಿಯನ್ನು ಚುರುಕುಗೊಳಿಸುವಂತೆ ಅವರು ಸೂಚಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**